ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 22/02/2020

# ಮಾಜಿ ಸಚಿವ ಸಿ. ಚೆನ್ನಿಗಪ್ಪ ನಿಧನ

ಸಂ.ಕ. ಸಮಾಚಾರ ಬೆಂಗಳೂರು: 22/2/20

ಅನಾರೋಗ್ಯದಿಂದ ಬಳಲುತ್ತಿದ್ದ ಮಾಜಿ ಸಚಿವ ಹಾಗೂ ಜೆಡಿಎಸ್ ಪಕ್ಷದ ಹಿರಿಯ ನಾಯಕ ಸಿ. ಚನ್ನಿಗಪ್ಪ ಶುಕ್ರವಾರ ಬೆಂಗಳೂರಿನಲ್ಲಿ ಕೊನೆಯುಸಿರೆಳೆದಿದ್ದಾರೆ.



ಮೃತರಿಗೆ 74 ವರ್ಷ ವಯಸ್ಸಾಗಿತ್ತು. ಅನಾರೋಗ್ಯದಿಂದ ಬಳಲುತ್ತಿದ್ದ ಅವರನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ದಾಖಲು ಮಾಡಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಬೆಳಗ್ಗೆ 8.30ಕ್ಕೆ ಕೊನೆಯುಸಿರೆಳೆದರು ಎಂದು ಅವರ ಕುಟುಂಬದ ಮೂಲಗಳು ತಿಳಿಸಿವೆ.

ಚೆನ್ನಿಗಪ್ಪ ಅವರು ಪತ್ನಿ ಸಿದ್ದಗಂಗಮ್ಮ, ಪುತ್ರರಾದ ಶಾಸಕ ಡಿ.ಸಿ.ಗೌರಿಶಂಕರ್, ಕೈಗಾರಿಕೋದ್ಯಮಿ ಡಿ.ಸಿ.ಅರುಣ್ ಕುಮಾರ್, ಡಿ.ಸಿ.ವೇಣುಗೋಪಾಲ ಸೇರಿದಂತೆ ಮೂರು ಜನ ಗಂಡು ಮಕ್ಕಳು ಹಾಗೂ ಓರ್ವ ಪುತ್ರಿ ನಾಗರತ್ನ ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಚನ್ನಿಗಪ್ಪ ಅವರು ಕೊರಟಗೆರೆ ವಿಧಾನಸಭಾ ಕ್ಷೇತ್ರದಿಂದ 3 ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು. ಧರಂಸಿಂಗ್ ಸರ್ಕಾರದ ಅವಧಿಯಲ್ಲಿ ಅಬಕಾರಿ ಸಚಿವರಾಗಿದ್ದರು. ಅಷ್ಟೇ ಅಲ್ಲದೇ ಎಚ್.ಡಿ.ಕುಮಾರಸ್ವಾಮಿ ಅಧಿಕಾರವಧಿಯಲ್ಲಿ ಅರಣ್ಯ ಸಚಿವರಾಗಿದ್ದರು.

ಫೆ.22ರ ಬೆಳಗ್ಗೆ 11 ಗಂಟೆಗೆ ಚೆನ್ನಿಗಪ್ಪ ಅವರ ಪಾರ್ಥಿವ ಶರೀರದ ಅಂತ್ಯಕ್ರಿಯೆಯನ್ನು ಅವರ ಸ್ವಗ್ರಾಮ ಬೈರನಾಯಕನಹಳ್ಳಿಯಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬ ಮೂಲಗಳು ತಿಳಿಸಿವೆ.

ಸಂತಾಪ: ಚೆನ್ನಿಗಪ್ಪ ನಿಧನಕ್ಕೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ, ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.